ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

14

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 7/10/20

ಮತದಾರರ ಗುರುತಿನ ಚೀಟಿ ಪತ್ತೆ ಕೇಸ್: ಮುನಿರತ್ನಗೆ ಹೈಕೋರ್ಟ್ ನೋಟಿಸ್



- ನಕಲಿ ವೋಟರ್ ಐಟಿ ಪ್ರಕರಣದಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲು
- ಮಾ.17ರಂದು ರಾಜ್ಯ ಸರ್ಕಾರ ಹಾಗೂ ಸಿಬಿಐಗೆ ನೋಟಿಸ್ ಜಾರಿ
- ಕೋರ್ಟ್ ಬಿಡುಗಡೆ ಮಾಡಿದ ಹ್ಯಾಂಡ್ ಸಮನ್ಸ್ ಸ್ವೀಕರಿಸದ ಮುನಿರತ್ನ
- ಸೂಕ್ತ ರೀತಿಯಲ್ಲಿ ತನಿಖೆ ಆಗಿಲ್ಲ ಎಂಬ ಆಕ್ಷೇಪ

ಬೆಂಗಳೂರು: ಉಪ ಚುನಾವಣೆ ಪ್ರಕ್ರಿಯೆ ನಡುವೆಯೇ, ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಪಾರ್ಟ್‌ಮೆಂಟ್ ಒಂದರಲ್ಲಿ ಸಾವಿರಾರು ಮತದಾರರ ಗುರುತಿನ ಚೀಟಿಗಳನ್ನು ಸಂಗ್ರಹಿಸಿಟ್ಟಿದ್ದು ಪತ್ತೆಯಾದ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲು ಕೋರಿ ಸಲ್ಲಿಕೆಯಾಗಿರುವ ಅರ್ಜಿ ಸಂಬಂಧ ಮಾಜಿ ಶಾಸಕ ಮುನಿರತ್ನಗೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಈ ಕುರಿತು ಬೆಂಗಳೂರಿನ ಆನಂದ್ ಕುಮಾರ್ ಹಾಗೂ ಸಂತೋಷ್ ಕುಮಾರ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮುಖ್ಯ ನ್ಯಾ. ಎ.ಎಸ್. ಓಕ್ ನೇತೃತ್ವದ ವಿಭಾಗೀಯ ನ್ಯಾಯಪೀಠದ ಮುಂದೆ ಮಂಗಳವಾರ ವಿಚಾರಣೆಗೆ ಬಂದಿತ್ತು.

ಈ ವೇಳೆ ಅರ್ಜಿದಾರರ ಪರ ವಕೀಲ ಕೆ.ಬಿ.ಕೆ ಸ್ವಾಮಿ ವಾದ ಮಂಡಿಸಿ, ಪ್ರಕರಣದ 5ನೇ ಪ್ರತಿವಾದಿ ಮುನಿರತ್ನ ಅವರು 'ಹ್ಯಾಂಡ್ ಸಮನ್ಸ್' (ಅರ್ಜಿದಾರರ ಪರ ವಕೀಲರು ಖುದ್ದು ನೀಡಿದ ನೋಟಿಸ್) ಸ್ವೀಕರಿಸಿಲ್ಲ ಎಂಬ ವಿಚಾರವನ್ನು ನ್ಯಾಯಪೀಠದ ಗಮನಕ್ಕೆ ತಂದರು. ಅದಕ್ಕೆ ಮುನಿರತ್ನ ಅವರಿಗೆ ನೋಟಿಸ್ (ಕೋರ್ಟ್ ಸಮನ್ಸ್) ಜಾರಿಗೊಳಿಸಲು ಆದೇಶಿಸಿದ ಹೈಕೋರ್ಟ್, ನ.11ರೊಳಗೆ ನೋಟಿಸ್‌ಗೆ ಉತ್ತರ ನೀಡಬೇಕು ಹಾಗೂ ಮುಂದಿನ ವಿಚಾರಣೆಯ ದಿನದಂದು ವಕೀಲರ ಮೂಲಕ ಕೋರ್ಟ್‌ಗೆ ಹಾಜರಾಗಬೇಕು ಎಂದು ನಿರ್ದೇಶನ ನೀಡಿ ವಿಚಾರಣೆ ಮುಂದೂಡಿತು. ಈ ಅರ್ಜಿಗೆ ಸಂಬಂಧಿಸಿದಂತೆ 2020 ಮಾ.17ರಂದು ರಾಜ್ಯ ಸರ್ಕಾರ ಹಾಗೂ ಸಿಬಿಐಗೆ ನೋಟಿಸ್ ಜಾರಿ ಮಾಡಲಾಗಿತ್ತು.

ಅರ್ಜಿದಾರರ ಮನವಿ ಏನು?: 2018ರ ಸಾರ್ವತ್ರಿಕ ಚುನಾವಣೆಯಲ್ಲಿ ಮುನಿರತ್ನ ಸ್ಪರ್ಧಿಸಿದ್ದ ಆರ್.ಆರ್.ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಜಾಲಹಳ್ಳಿಯ ಅಪಾರ್ಟ್‌ಮೆಂಟ್ ಒಂದರಲ್ಲಿ ಸಾವಿರಾರು ಮತದಾರರ ಗುರುತಿನ ಚೀಟಿಗಳು ಪತ್ತೆಯಾಗಿದ್ದವು. ಅವುಗಳಲ್ಲಿ ನಕಲಿ ವೋಟರ್ ಐಡಿಗಳೂ ಸೇರಿದ್ದವು. ಮತದಾರರ ಗುರುತಿನ ಚೀಟಿ ಸಂಗ್ರಹಿಸುವ ಮೂಲಕ ಮುನಿರತ್ನ ಚುನಾವಣಾ ಆಕ್ರಮಣೆಸಗಿದ್ದಾರೆ. ಪ್ರಕರಣದ ಸಂಬಂಧ ರಾಜ್ಯ ಚುನಾವಣಾ ಆಯೋಗ ಹಾಗೂ ಸ್ಥಳೀಯ ನಿವಾಸಿ ರಾಕೇಶ್ ಜಾಲಹಳ್ಳಿ ಠಾಣೆಯಲ್ಲಿ 2 ಪ್ರತ್ಯೇಕ ದೂರುಗಳನ್ನು ದಾಖಲಿಸಿವ್ದಾರೆ. ಆದರೆ, ಪೊಲೀಸರು ಪ್ರಕರಣದ ತನಿಖೆಯನ್ನು ಸೂಕ್ತ ರೀತಿಯಲ್ಲಿ ನಡೆಸಿಲ್ಲ ಆದ್ದರಿಂದ, ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಬೇಕೆಂದು ಅರ್ಜಿದಾರರು ಕೋರಿದ್ದಾರೆ.